All India Radio: Bangalore
National Bulletin In Kannada
14.10.2025 7.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

< > < > < > < >

ಮುಖ್ಯಾಂಶಗಳು

೧. ಮಂಗೋಲಿಯಾ ಅಧ್ಯಕ್ಷರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಮಾತುಕತೆ: ಹಲವು ಒಪ್ಪಂದಗಳಿಗೆ ಸಹಿ ನಿರೀಕ್ಷೆ

೨. ವಿಶ್ವ ನಾಯಕರ ಸಮ್ಮುಖದಲ್ಲಿ ಗಾಜಾ ಶಾಂತಿ ಒಪ್ಪಂದಕ್ಕೆ ಸಹಿ

೩. ನವದೆಹಲಿಯಲ್ಲಿ ನಾಳೆಯಿಂದ ೧೬ನೇ ಅಂತಾರಾಷ್ಟ್ರೀಯ ರೈಲ್ವೆ ಸಲಕರಣೆಗಳ ಪ್ರದರ್ಶನ

೪. ಟೆಸ್ಟ್ ಕ್ರಿಕೆಟ್: ವೆಸ್ಟ್ ಇಂಡೀಸ್ ವಿರುದ್ಧ ಸರಣಿ ಗೆಲುವಿನ ಹೊಸ್ತಿಲಲ್ಲಿ ಭಾರತ

><><><><><

ಮಂಗೋಲಿಯಾ ಅಧ್ಯಕ್ಷ ಖುರೇಲ್‌ಸುಖ್ ಉಖ್ನಾ ಅವರು ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಎರಡೂ ಕಡೆಯವರು ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದ್ದಾರೆ. ಮಾತುಕತೆಯ ನಂತರ ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಮಂಗೋಲಿಯಾ ಅಧ್ಯಕ್ಷರು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಇದೇ ವೇಳೆ ಮಂಗೋಲಿಯಾ ಅಧ್ಯಕ್ಷರಿಗಾಗಿ ರಾಷ್ಟ್ರಪತಿಯವರು ಔತಣಕೂಟವನ್ನು ಆಯೋಜಿಸಲಿದ್ದಾರೆ. ಮಂಗೋಲಿಯಾದ ಅಧ್ಯಕ್ಷ ಖುರೇಲ್‌ಸುಖ್ ಉಖ್ನಾ ಅವರು ನಾಲ್ಕು ದಿನಗಳ ಭಾರತ ಭೇಟಿಗಾಗಿ ನಿನ್ನೆ ನವದೆಹಲಿಗೆ

ಆಗಮಿಸಿದರು. ಅವರನ್ನು ಕೇಂದ್ರ ನಾಗರಿಕ ವಿಮಾನಯಾನ ಖಾತೆ ರಾಜ್ಯ ಸಚಿವ ಮುರಳೀಧರ್ ಮೊಹೋಲ್ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು. ಮಂಗೋಲಿಯಾದ ಅಧ್ಯಕ್ಷರೊಂದಿಗೆ ಸಂಪುಟ ಸಚಿವರು, ಸಂಸತ್ ಸದಸ್ಯರು, ಹಿರಿಯ ಅಧಿಕಾರಿಗಳು, ಉದ್ಯಮಿಗಳು ಮತ್ತು ಸಾಂಸ್ಕೃತಿಕ ಪ್ರತಿನಿಧಿಗಳನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗವಿದೆ. ಮಂಗೋಲಿಯಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಖುರೇಲ್‌ಸುಖ್ ಅವರ ಮೊದಲ ಭಾರತ ಭೇಟಿ ಇದಾಗಿದೆ.

><><><><

ಈಜಿಪ್ಟ್‌ನ ಶಾರ್ಮ್ ಎಲ್-ಶೇಖ್‌ನಲ್ಲಿ ನಿನ್ನೆ ರಾತ್ರಿ ನಡೆದ ಶೃಂಗಸಭೆಯಲ್ಲಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಈಜಿಪ್ಟ್, ಕತಾರ್ ಮತ್ತು ಟರ್ಕಿಯ ನಾಯಕರ ಸಮ್ಮುಖದಲ್ಲಿ ಗಾಜಾ ಶಾಂತಿ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಶೃಂಗಸಭೆಯಲ್ಲಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇದು ಜಗತ್ತಿಗೆ ಮತ್ತು ಮಧ್ಯಪ್ರಾಚ್ಯಕ್ಕೆ ಅದ್ಭುತ ದಿನವಾಗಿದೆ ಎಂದು ಹೇಳಿದರು. ಪ್ರಾದೇಶಿಕ ನಾಯಕರ ಬೆಂಬಲಕ್ಕಾಗಿ ಅವರು ಇದೇ ವೇಳೆ ಧನ್ಯವಾದ ಸಲ್ಲಿಸಿದರು. ಮಧ್ಯಪ್ರಾಚ್ಯದಲ್ಲಿ ಮೂರನೇ ಮಹಾಯುದ್ಧ ಪ್ರಾರಂಭವಾಗುವ ಮುನ್ಸೂಚನೆಗಳನ್ನು ಅವರು ತಳ್ಳಿಹಾಕಿದರು. ಗಾಜಾದಲ್ಲಿ ಯುದ್ಧ ಮುಗಿದಿದೆ ಮತ್ತು ಮಾನವೀಯ ನೆರವು ಹರಿದು ಬರುತ್ತಿದೆ ಎಂದು ಟ್ರಂಪ್ ಹೇಳಿದರು. ಭಾರತ, ಬ್ರಿಟನ್, ಫ್ರಾನ್ಸ್, ಜರ್ಮನಿ, ಕೆನಡಾ, ಸೌದಿ ಅರೇಬಿಯಾ, ಐರೋಪ್ಯ ಒಕ್ಕೂಟ, ಯುಎಇ ಸೇರಿದಂತೆ ೩೦ ಕ್ಕೂ ಹೆಚ್ಚು ದೇಶಗಳು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳ ನಾಯಕರು ಮತ್ತು ಪ್ರತಿನಿಧಿಗಳು ಶೃಂಗಸಭೆಯಲ್ಲಿ ಭಾಗವಹಿಸಿದ್ದರು.

><><><><

ಈಜಿಪ್ಟ್‌ನಲ್ಲಿ ನಿನ್ನೆ ನಡೆದ ಶರ್ಮ್ ಎಲ್-ಶೇಖ್ ಶೃಂಗಸಭೆಯಲ್ಲಿ ಭಾರತವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶ್ಲಾಘಿಸಿದ್ದು, ಪ್ರಧಾನಿ ನರೇಂದ್ರ ಮೋದಿಯವರನ್ನು 'ಅತ್ಯಂತ ಉತ್ತಮ ಸ್ನೇಹಿತ' ಎಂದು ಕರೆದಿದ್ದಾರೆ. ಭಾರತ, ಅಮೆರಿಕದ ಅತ್ಯುತ್ತಮ ಸ್ನೇಹಿತ. ಪ್ರಧಾನಿ ನರೇಂದ್ರ ಮೋದಿ ಅವರು ಉನ್ನತ ಸ್ಥಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಉತ್ತಮ ದೇಶ. ಪ್ರಧಾನಿ ಮೋದಿ ಅದ್ಭುತ ಕೆಲಸ ಮಾಡಿದ್ದಾರೆ ಎಂದು ಟ್ರಂಪ್ ಹೇಳಿದ್ದಾರೆ. ಪಾಕಿಸ್ತಾನ ಮತ್ತು ಭಾರತದ ನಡುವಿನ ಸಂಬಂಧಗಳ ಬಗ್ಗೆಯೂ ಅಮೆರಿಕ ಅಧ್ಯಕ್ಷ ಆಶಾವಾದ ವ್ಯಕ್ತಪಡಿಸಿದರು. ಎರಡೂ ದೇಶಗಳು ಒಟ್ಟಿಗೆ ಬಹಳ ಚೆನ್ನಾಗಿ ಬದುಕಲಿವೆ ಎಂದು ಆಶಿಸಿದ್ದಾರೆ.

ಧ್ವನಿ: ಡೊನಾಲ್ಡ್ ಟ್ರಂಪ್

ಐತಿಹಾಸಿಕ ಗಾಜಾ ಶಾಂತಿ ಯೋಜನೆಯ ಯಶಸ್ಸಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ದೂರವಾಣಿ ಕರೆ ಮೂಲಕ ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

><><><><><

ಎರಡು ವರ್ಷಗಳಿಗೂ ಹೆಚ್ಚು ಕಾಲ ಹಮಾಸ್ ಸೆರೆಯಲ್ಲಿದ್ದ ಇಸ್ರೇಲ್‌ನ ಎಲ್ಲಾ ಒತ್ತೆಯಾಳುಗಳ ಬಿಡುಗಡೆಯನ್ನು ಭಾರತ ಸ್ವಾಗತಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಒತ್ತೆಯಾಳುಗಳ ಕುಟುಂಬಗಳ ಧೈರ್ಯ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಅಚಲ ಶಾಂತಿ ಪ್ರಯತ್ನಗಳು ಮತ್ತು ಇಸ್ರೇಲ್ ಪ್ರಧಾನಿ ನೆತನ್ಯಾಹು ಅವರ ಬಲವಾದ ಸಂಕಲ್ಪದಿಂದಾಗಿ ಅವರು ಸ್ವತಂತ್ರಗೊಂಡಿದ್ದಾರೆ ಎಂದು ಹೇಳಿದ್ದಾರೆ. ಗಾಜಾ ಪ್ರದೇಶದಲ್ಲಿ

ಶಾಂತಿಯನ್ನು ಸ್ಥಾಪಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪ್ರಾಮಾಣಿಕ ಪ್ರಯತ್ನಗಳನ್ನು ಭಾರತ ಬೆಂಬಲಿಸುತ್ತದೆ ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.

><><><><><

'ಭಾರತದ ಕಡಲ ಆರ್ಥಿಕತೆ: ಆಳ ಸಮುದ್ರ ಮತ್ತು ಕಡಲಾಚೆಯ ಮೀನುಗಾರಿಕೆಯನ್ನು ಬಳಸಿಕೊಳ್ಳುವ ಕಾರ್ಯತಂತ್ರ' ಎಂಬ ಶೀರ್ಷಿಕೆಯ ವರದಿಯನ್ನು ನೀತಿ ಆಯೋಗದ ಸಿಇಒ ಬಿ.ವಿ.ಆರ್. ಸುಬ್ರಹ್ಮಣ್ಯಂ ನಿನ್ನೆ ಬಿಡುಗಡೆ ಮಾಡಿದರು. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಸುಮಾರು ೧೨ ನಾಟಿಕಲ್ ಮೈಲುಗಳಷ್ಟು ಜಲ ವಲಯ ಮತ್ತು ೨೦೦ ಮೈಲುಗಳಷ್ಟು ಆರ್ಥಿಕ ವಲಯವನ್ನು ಹೊಂದಿರುವ ಭಾರತ, ತನ್ನ ಆಳ ಸಮುದ್ರ ಸಂಪನ್ಮೂಲಗಳನ್ನು ಹೆಚ್ಚು ಅನ್ವೇಷಿಸಿಲ್ಲ ಎಂದು ಹೇಳಿದರು. ಕರಾವಳಿ ಸಮುದಾಯಗಳಿಗೆ ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಮತ್ತು ರಾಷ್ಟ್ರದ ನೀಲಿ ಆರ್ಥಿಕತೆಗೆ ಕೊಡುಗೆ ನೀಡಲು, ಆಡಳಿತವನ್ನು ಬಲಪಡಿಸಲು, ನಾವೀನ್ಯತೆಯನ್ನು ಬೆಳೆಸಲು ಮತ್ತು ಪಾಲುದಾರರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಸಮಗ್ರ ಚೌಕಟ್ಟನ್ನು ಈ ವರದಿ ನೀಡುತ್ತದೆ ಎಂದು ಅವರು ತಿಳಿಸಿದರು.

><><><><><

ಏಷ್ಯಾದ ಅತಿದೊಡ್ಡ ಮತ್ತು ವಿಶ್ವದ ಎರಡನೇ ಅತಿದೊಡ್ಡ ರೈಲ್ವೆ ಪ್ರದರ್ಶನವಾದ ೧೬ನೇ ಅಂತಾರಾಷ್ಟ್ರೀಯ ರೈಲ್ವೆ ಸಲಕರಣೆಗಳ ಪ್ರದರ್ಶನ ಇದೇ ೧೫ ರಿಂದ ೧೭ ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿದೆ. ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಾಳೆ ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ೧೫ ಕ್ಕೂ ಹೆಚ್ಚು ದೇಶಗಳಲ್ಲಿ ೪೫೦ ಕ್ಕೂ ಹೆಚ್ಚು

ಪ್ರದರ್ಶಕರು ೩೦ ಸಾವಿರಕ್ಕೂ ಹೆಚ್ಚು ಅತ್ಯಾಧುನಿಕ ರೈಲ್ವೆ ಮತ್ತು ಮೆಟ್ರೋ ಉತ್ಪನ್ನಗಳು, ನಾವೀನ್ಯತೆಗಳು ಮತ್ತು ಸುಸ್ಥಿರ ಪರಿಹಾರಗಳನ್ನು ಪ್ರದರ್ಶಿಸಲಿದ್ದಾರೆ. ಎರಡು ದಿನಗಳ ಈ ಕಾರ್ಯಕ್ರಮವನ್ನು ಭಾರತೀಯ ಕೈಗಾರಿಕಾ ಒಕ್ಕೂಟ, ಸಿಐಐ ರೈಲ್ವೆ ಸಚಿವಾಲಯದ ಸಹಯೋಗದೊಂದಿಗೆ ಆಯೋಜಿಸಲಿದೆ. ನವದೆಹಲಿಯಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ರೈಲ್ವೆ ಮಂಡಳಿಯ ಮಾಹಿತಿ ಮತ್ತು ಪ್ರಚಾರದ ಕಾರ್ಯನಿರ್ವಾಹಕ ನಿರ್ದೇಶಕ ದಿಲೀಪ್ ಕುಮಾರ್, ಪ್ರದರ್ಶನದ ಸಮಯದಲ್ಲಿ ರೈಲ್ವೆ ಸಚಿವಾಲಯವು ಅಮೃತ್ ಭಾರತ್ ಮತ್ತು ತೇಜಸ್ ಕೋಚ್, ವಂದೇ ಭಾರತ್ ರೈಲು, ಕೋಲ್ಕತ್ತಾ ಮೆಟ್ರೋ ಮತ್ತು ನಮೋ ಭಾರತ್ ರೈಲುಗಳನ್ನು ಪ್ರದರ್ಶಿಸಲಾಗುವುದು ಎಂದು ತಿಳಿಸಿದರು. ಈ ಪ್ರದರ್ಶನವು ಭಾರತೀಯ ತಯಾರಕರಿಗೆ ಜಾಗತಿಕ ಮಟ್ಟದಲ್ಲಿ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲು ಅವಕಾಶವನ್ನು ಒದಗಿಸುತ್ತದೆ ಎಂದು ಅವರು ಹೇಳಿದರು.

><><><><

ಪ್ರಸಕ್ತ ಹಣಕಾಸು ವರ್ಷದಲ್ಲಿ ಇದುವರೆಗೆ ನಿವ್ವಳ ನೇರ ತೆರಿಗೆ ಸಂಗ್ರಹ ಶೇಕಡ ೬.೩೩ ರಷ್ಟು ಹೆಚ್ಚಾಗಿ ೧೧.೮೯ ಲಕ್ಷ ಕೋಟಿ ರೂಪಾಯಿಗಳನ್ನು ತಲುಪಿದೆ. ಏಪ್ರಿಲ್ ೧ ರಿಂದ ಅಕ್ಟೋಬರ್ ೧೨ ರವರೆಗೆ ನಿವ್ವಳ ಕಾರ್ಪೊರೇಟ್ ತೆರಿಗೆ ಸಂಗ್ರಹ ಸುಮಾರು ೫.೦೨ ಲಕ್ಷ ಕೋಟಿ ರೂಪಾಯಿಗಳಾಗಿದ್ದು, ಕಳೆದ ವರ್ಷದ ಇದೇ ಅವಧಿಯಲ್ಲಿ ಇದು ೪.೯೨ ಲಕ್ಷ ಕೋಟಿ ರೂಪಾಯಿಗಳಷ್ಟಿತ್ತು ಎಂದು ಆದಾಯ ತೆರಿಗೆ ಇಲಾಖೆ ತಿಳಿಸಿದೆ. ಕಾರ್ಪೊರೇಟ್ ಅಲ್ಲದ ತೆರಿಗೆ ಸುಮಾರು ೬.೫೬ ಲಕ್ಷ ಕೋಟಿ ರೂಪಾಯಿಗಳಾಗಿದ್ದು, ೨೦೨೪ ರಲ್ಲಿ ಇದೇ ಅವಧಿಯಲ್ಲಿ ಇದು ೫.೯೪ ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚಾಗಿದೆ. ಸೆಕ್ಯುರಿಟೀಸ್ ವಹಿವಾಟು ತೆರಿಗೆ ಸಂಗ್ರಹ,

೩೦ ಸಾವಿರ ೮೭೮ ಕೋಟಿ ರೂಪಾಯಿಗಳಾಗಿದ್ದು, ೨೦೨೪ ರಲ್ಲಿ ಇದು ೩೦ ಸಾವಿರದ ೬೩೦ ಕೋಟಿ ರೂಪಾಯಿಗಳಷ್ಟಿತ್ತು. ಮರುಪಾವತಿಗಳನ್ನು ಸರಿಹೊಂದಿಸುವ ಮೊದಲು ಒಟ್ಟು ನೇರ ತೆರಿಗೆ ಸಂಗ್ರಹ, ೧೩.೯೨ ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚಾಗಿದೆ.  ಇದು ಹಿಂದಿನ ವರ್ಷದ ಅವಧಿಗೆ ಹೋಲಿಸಿದರೆ ಶೇಕಡ ೨.೩೬ ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ. ಮರುಪಾವತಿ ವಿತರಣೆಗಳು ಶೇಕಡ ೧೬ ರಷ್ಟು ಕುಸಿದು, ೨.೦೩ ಲಕ್ಷ ಕೋಟಿ ರೂಪಾಯಿಗಳಿಗೆ ತಲುಪಿದೆ.

><><><><

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ವೆಸ್ಟ್ ಇಂಡೀಸ್ ತಂಡದ ವಿರುದ್ಧದ ಟೆಸ್ಟ್ ಕ್ರಿಕೆಟ್ ಪಂದ್ಯದ ನಾಲ್ಕನೇ ದಿನದಾಟದ ಅಂತ್ಯದಲ್ಲಿ ನಿನ್ನೆ ಭಾರತ ೧ ವಿಕೆಟ್ ನಷ್ಟಕ್ಕೆ ೬೩ ರನ್ ಮಾಡಿದೆ. ಇಂದು ಅಂತಿಮ ದಿನದಾಟ ಮುಂದುವರಿಯಲಿದೆ. ಗೆಲುವಿಗಾಗಿ ಭಾರತ ತಂಡಕ್ಕೆ ೫೮ ರನ್‌ಗಳ ಅಗತ್ಯವಿದೆ.

ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ, ೫ ವಿಕೆಟ್ ನಷ್ಟಕ್ಕೆ ೫೧೮ ರನ್ ಮಾಡಿ, ಡಿಕ್ಲೇರ್ ಮಾಡಿಕೊಂಡಿತ್ತು. ವೆಸ್ಟ್ ಇಂಡೀಸ್ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೨೪೮ ರನ್ ಹಾಗೂ ಎರಡನೇ ಇನ್ನಿಂಗ್ಸ್‌ನಲ್ಲಿ ೩೯೦ ರನ್ ಮಾಡಿದೆ.

><><><><

ವಿಶಾಖಪಟ್ಟಣದಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ, ಬಾಂಗ್ಲಾದೇಶವನ್ನು ೩ ವಿಕೆಟ್‌ಗಳಿಂದ ಸೋಲಿಸಿತು. ಬಾಂಗ್ಲಾದೇಶ ನೀಡಿದ್ದ ೨೩೩ ರನ್‌ಗಳ ಗುರಿಯನ್ನು ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡ, ಕ್ಲೋಯ್ ಟ್ರಯಾನ್ ಅವರ ೬೨

ರನ್‌ಗಳ ಅದ್ಭುತ ಆಟದಿಂದಾಗಿ, ಗುರಿಯನ್ನು ತಲುಪಿತು. ಟ್ರಯಾನ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು. ಕೊಲಂಬೊದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯುವ ಇಂದಿನ ಪಂದ್ಯದಲ್ಲಿ, ಶ್ರೀಲಂಕಾ ತಂಡ, ನ್ಯೂಜಿಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

><><><><

ಬ್ಯಾಡ್ಮಿಂಟನ್ ತಾರೆ ಲಕ್ಷ್ಯ ಸೇನ್ ಮತ್ತು ಪುರುಷರ ಡಬಲ್ಸ್ ಜೋಡಿ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಇಂದಿನಿಂದ ಪ್ರಾರಂಭವಾಗುವ ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ೨೦೨೪ ರಲ್ಲಿ ಭಾರತದ ಸವಾಲನ್ನು ಮುನ್ನಡೆಸಲಿದ್ದಾರೆ.

><><><><